**All India Radio: Bangalore**
**National Bulletin In Kannada**
**11.07.2026 7.35 pm**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

**೧. ಪ್ರಧಾನಿ ನರೇಂದ್ರ ಮೋದಿ ನ್ಯೂಜಿಲೆಂಡ್ ಭೇಟಿ ಸಂಪನ್ನ; ಉಭಯ ದೇಶಗಳ ನಡುವೆ ಐದು ಒಪ್ಪಂದಗಳಿಗೆ ಸಹಿ**

**೨. ಬೆಂಗಳೂರು-ಹೈದರಾಬಾದ್ ನಡುವೆ ಬುಲೆಟ್ ರೈಲು ಯೋಜನೆಗೆ ಚಿಂತನೆ - ರೈಲ್ವೆ ಸಚಿವ ಅಶ್ವಿನಿ ವೈಷ್ಣವ್**

**೩. ವಿಯೆಟ್ನಾಂನಲ್ಲಿ ಸ್ಪೀಡ್ ಬೋಟ್ ಮಗುಚಿ ೧೫ ಮಂದಿ ಭಾರತೀಯರ ಸಾವು**

**೪. ಫಿಫಾ ವಿಶ್ವಕಪ್ ಪುಟ್ಬಾಲ್: ಮೂರನೇ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ನಾರ್ವೆ-ಇಂಗ್ಲೆಂಡ್ ಮುಖಾಮುಖಿ**

**<>><><*><><<>**

ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ಎರಡು ದಿನಗಳ ನ್ಯೂಜಿಲೆಂಡ್ ಭೇಟಿಯನ್ನು ಪೂರ್ಣಗೊಳಿಸಿ, ಭಾರತಕ್ಕೆ ಪ್ರಯಾಣ ಬೆಳೆಸಿದ್ದಾರೆ. ನಾಲ್ಕು ದಶಕಗಳಲ್ಲಿ ಭಾರತೀಯ ಪ್ರಧಾನಿಯೊಬ್ಬರು ನ್ಯೂಜಿಲೆಂಡ್‌ಗೆ ನೀಡಿದ ಮೊದಲ ಭೇಟಿ ಇದಾಗಿದ್ದು, ದ್ವಿಪಕ್ಷೀಯ ಸಂಬಂಧಗಳಿಗೆ ಪ್ರಮುಖ ಉತ್ತೇಜನ ನೀಡಿದೆ. ಭೇಟಿಯ ಸಮಯದಲ್ಲಿ, ಪ್ರಧಾನಿ ನರೇಂದ್ರ ಮೋದಿ ಅವರು ನ್ಯೂಜಿಲೆಂಡ್ ಪ್ರಧಾನಿ ಕ್ರಿಸ್ಟೋಫರ್ ಲಕ್ಸನ್ ಅವರೊಂದಿಗೆ ಮಾತುಕತೆ ನಡೆಸಿದರು. ರಕ್ಷಣೆ, ಪ್ರವಾಸೋದ್ಯಮ, ಕ್ರೀಡೆ, ವಿಪತ್ತು ನಿರ್ವಹಣೆ, ಹೈನುಗಾರಿಕೆ ಮತ್ತು ಪಶುಸಂಗೋಪನೆ ಕ್ಷೇತ್ರಗಳು ಸೇರಿದಂತೆ ಐದು ತಿಳುವಳಿಕೆ ಒಪ್ಪಂದಗಳ ವಿನಿಮಯಕ್ಕೆ ಉಭಯ ನಾಯಕರು ಸಾಕ್ಷಿಯಾದರು.ಇದೇ ವೇಳೆ ಆಕ್ಲೆಂಡ್‌ನ ಸ್ಪಾರ್ಕ್ ಅರೆನಾದಲ್ಲಿ ನಡೆದ ಸಮುದಾಯ ಕಾರ್ಯಕ್ರಮದಲ್ಲಿ ಹತ್ತು ಸಾವಿರಕ್ಕೂ ಹೆಚ್ಚು ಭಾರತೀಯ ಸಮುದಾಯದವರು ಭಾಗವಹಿಸಿದ್ದರು. ಸಭೆಯನ್ನುದ್ದೇಶಿಸಿ ಮಾತನಾಡಿದ ನ್ಯೂಜಿಲೆಂಡ್ ಪ್ರಧಾನಿ ಕ್ರಿಸ್ಟೋಫರ್ ಲಕ್ಸನ್, ಭಾರತವನ್ನು ವಿಶ್ವಾಸಾರ್ಹ ಸ್ನೇಹಿತ ಎಂದು ಬಣ್ಣಿಸಿದರು. ನ್ಯೂಜಿಲೆಂಡ್‌ನ ಪ್ರಗತಿಗೆ ಭಾರತೀಯ ಸಮುದಾಯದ ಕೊಡುಗೆಯನ್ನು ಶ್ಲಾಘಿಸಿದರು. ಈ ಭೇಟಿಯು ಭಾರತ-ನ್ಯೂಜಿಲೆಂಡ್ ಸಂಬಂಧಗಳಲ್ಲಿ ಹೊಸ ಅಧ್ಯಾಯವನ್ನು ಬರೆದಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

**<>><><*><><<>**

ನ್ಯೂಜಿಲೆಂಡ್‌ನಲ್ಲಿರುವ ಭಾರತೀಯ ಸಮುದಾಯವು ಉಭಯ ದೇಶಗಳ ನಡುವಿನ ಬೆಳೆಯುತ್ತಿರುವ ಪಾಲುದಾರಿಕೆಗೆ ಪ್ರಮುಖ ಆಧಾರಸ್ತಂಭವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಆಕ್ಲೆಂಡ್‌ನಲ್ಲಿ ನಡೆದ ಸಮುದಾಯ ಕಾರ್ಯಕ್ರಮದಲ್ಲಿ ಭಾರತೀಯ ವಲಸಿಗರನ್ನುದ್ದೇಶಿಸಿ ಮಾತನಾಡಿದ ಅವರು, ಭಾರತ-ನ್ಯೂಜಿಲೆಂಡ್ ಸಂಬಂಧಗಳು ಹಂಚಿಕೆಯ ನೆನಪುಗಳು, ನಿರಂತರ ಸ್ನೇಹ, ಸಾಮಾನ್ಯ ಮೌಲ್ಯಗಳು ಮತ್ತು ಉಜ್ವಲ ಭವಿಷ್ಯದ ಬದ್ಧತೆಯ ಮೇಲೆ ನಿರ್ಮಿಸಲಾಗಿದೆ ಎಂದರು. ಹೊಸ ದಿಗಂತಗಳ ಕಡೆಗೆ ನೋಡುವ ನ್ಯೂಜಿಲೆಂಡ್‌ನ ಸಂಪ್ರದಾಯದಂತೆ, ಎರಡೂ ದೇಶಗಳು ತಮ್ಮ ಮುಂದೆ ಅವಕಾಶಗಳ ಮುಕ್ತ ಸಮುದ್ರವನ್ನು ಹೊಂದಿವೆ ಮತ್ತು ಪಾಲುದಾರಿಕೆಯನ್ನು ಹೆಚ್ಚಿನ ಎತ್ತರಕ್ಕೆ ಕೊಂಡೊಯ್ಯಲು ಬದ್ಧವಾಗಿವೆ ಎಂದು ತಿಳಿಸಿದರು. ಆಕ್ಲೆಂಡ್‌ನಿಂದ ವೆಲ್ಲಿಂಗ್ಟನ್‌ವರೆಗೆ ಮತ್ತು ಕ್ರೈಸ್ಟ್‌ಚರ್ಚ್‌ನಿಂದ ಕ್ವೀನ್ಸ್‌ಟೌನ್‌ವರೆಗೆ, ಭಾರತೀಯ ಸಮುದಾಯವು ದ್ವಿಪಕ್ಷೀಯ ಸಂಬಂಧಗಳನ್ನು ಬಲಪಡಿಸಲು ಅಪಾರ ಕೊಡುಗೆ ನೀಡಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ಈ ಸಂದರ್ಭದಲ್ಲಿ ಮಾತನಾಡಿದ ನ್ಯೂಜಿಲೆಂಡ್ ಪ್ರಧಾನಿ ಕ್ರಿಸ್ಟೋಫರ್ ಲಕ್ಸನ್, ಎರಡೂ ರಾಷ್ಟ್ರಗಳ ನಡುವೆ ಬೆಳೆಯುತ್ತಿರುವ ಕಾರ್ಯತಂತ್ರ ಮತ್ತು ಆರ್ಥಿಕ ಪಾಲುದಾರಿಕೆಯನ್ನು ಎತ್ತಿ ತೋರಿಸಿದರು.

**<>><><*><><<>**

ಪ್ರಜಾಪ್ರಭುತ್ವದಲ್ಲಿ ಭಿನ್ನಾಭಿಪ್ರಾಯಗಳು ಸಹಜ. ಆದರೆ ಸಂವಿಧಾನ ಮತ್ತು ಸಾರ್ವಜನಿಕ ಕಲ್ಯಾಣಕ್ಕೆ ಬದ್ಧತೆ ಇರಬೇಕು ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹೇಳಿದ್ದಾರೆ. ಗಯಾದ ಬಿಹಾರ ಸಾರ್ವಜನಿಕ ಆಡಳಿತ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆಯಲ್ಲಿ ೧೮ ನೇ ಬಿಹಾರ ವಿಧಾನಸಭೆಯ ಸದಸ್ಯರಿಗೆ ಎರಡು ದಿನಗಳ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಶಾಸಕರು ತಮ್ಮ ಸಾಂವಿಧಾನಿಕ ಜವಾಬ್ದಾರಿಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಸಜ್ಜುಗೊಳಿಸುವ ಮೂಲಕ ಪ್ರಜಾಪ್ರಭುತ್ವ ಸಂಸ್ಥೆಗಳನ್ನು ಬಲಪಡಿಸುತ್ತಾರೆ

ಎಂದರು.  ಪ್ರಶ್ನೋತ್ತರ ಅವಧಿ, ಶೂನ್ಯ ವೇಳೆ ಮತ್ತು ವ್ಯವಹಾರ ಸಲಹಾ ಸಮಿತಿಯ ಮಹತ್ವವನ್ನು ಎತ್ತಿ ತೋರಿಸಿದ ಉಪರಾಷ್ಟ್ರಪತಿ, ಶಾಸಕಾಂಗ ಕಾರ್ಯವನ್ನು ಹೆಚ್ಚು ಪರಿಣಾಮಕಾರಿ, ಪಾರದರ್ಶಕ ಮತ್ತು ನಾಗರಿಕ ಕೇಂದ್ರಿತವಾಗಿಸಲು ಕೃತಕ ಬುದ್ಧಿಮತ್ತೆ, ನೈಸರ್ಗಿಕ ಭಾಷಾ ಸಂಸ್ಕರಣೆ ಮತ್ತು 'ನೇವಾ' ನಂತಹ ಡಿಜಿಟಲ್ ಶಾಸಕಾಂಗ ಉಪಕ್ರಮಗಳಂತಹ ಉದಯೋನ್ಮುಖ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳುವಂತೆ ಕರೆ ನೀಡಿದರು.

<>><><*><><<>

ಬೆಂಗಳೂರು, ಪುಣೆ ಮತ್ತು ಚೆನ್ನೈಗೆ ಸಂಪರ್ಕಿಸುವ ಪ್ರಸ್ತಾವಿತ ಬುಲೆಟ್ ರೈಲು ಕಾರಿಡಾರ್‌ಗಳೊಂದಿಗೆ ಹೈದರಾಬಾದ್ ಅನ್ನು ಪ್ರಮುಖ ಹೈಸ್ಪೀಡ್ ರೈಲು ಕೇಂದ್ರವಾಗಿ ಅಭಿವೃದ್ಧಿಪಡಿಸುವ ಯೋಜನೆಗಳನ್ನು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಪ್ರಕಟಿಸಿದ್ದಾರೆ. ಹೈದರಾಬಾದ್‌ನಲ್ಲಿ ಇಂದು ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ಹೈಸ್ಪೀಡ್ ರೈಲು ಜಾಲವು ಪ್ರಯಾಣದ ಸಮಯವನ್ನು ಗಮನಾರ್ಹವಾಗಿ ಕಡಿಮೆ ಮಾಡುತ್ತದೆ ಮತ್ತು ದಕ್ಷಿಣ ಭಾರತದ ಪ್ರಮುಖ ಆರ್ಥಿಕ ಕೇಂದ್ರಗಳ ನಡುವಿನ ಸಂಪರ್ಕವನ್ನು ಬಲಪಡಿಸುತ್ತದೆ ಎಂದು ಹೇಳಿದರು. ಬಲವಾದ ದೇಶೀಯ ಚಿಪ್ ಪರಿಸರ ವ್ಯವಸ್ಥೆಯನ್ನು ನಿರ್ಮಿಸಲು ೩೧೫ ವಿಶ್ವವಿದ್ಯಾಲಯಗಳಲ್ಲಿ ಸೆಮಿಕಂಡಕ್ಟರ್ ವಿನ್ಯಾಸ ಪರಿಕರಗಳನ್ನು ಪರಿಚಯಿಸಲಾಗಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದರು.  ಈ ಸಂದರ್ಭದಲ್ಲಿ ಮಾತನಾಡಿದ ಕೇಂದ್ರ ಸಚಿವ ಜಿ. ಕಿಶನ್ ರೆಡ್ಡಿ, ಕೇಂದ್ರ ಸರ್ಕಾರ, ಬುಲೆಟ್ ರೈಲು ಯೋಜನೆಗಳಿಗಾಗಿ ಐದು ಟ್ರಿಲಿಯನ್ ರೂಪಾಯಿಗಳನ್ನು ಮೀಸಲಿಟ್ಟಿದೆ. ಸಿಕಂದರಾಬಾದ್ ಮತ್ತು ನಾಂಪಲ್ಲಿ ಸೇರಿದಂತೆ ತೆಲಂಗಾಣದ ೪೨ ರೈಲು ನಿಲ್ದಾಣಗಳನ್ನು ಆಧುನೀಕರಿಸಲಾಗುತ್ತಿದೆ ಎಂದು ಹೇಳಿದರು.

<>><><*><><<>

ಪುಸ್ತಕಗಳು ವ್ಯಕ್ತಿಯ ವ್ಯಕ್ತಿತ್ವವನ್ನು ರೂಪಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ. ಯುವ ಪೀಳಿಗೆ ಗ್ರಂಥಾಲಯಗಳೊಂದಿಗೆ ಸಂಪರ್ಕ ಸಾಧಿಸುವಂತೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಮನವಿ ಮಾಡಿದ್ದಾರೆ. ನವದೆಹಲಿಯಲ್ಲಿ ಇಂದು ಜಯಪ್ರಕಾಶ್ ನಾರಾಯಣ್ ಸಾರ್ವಜನಿಕ ಗ್ರಂಥಾಲಯ ಉದ್ಘಾಟಿಸಿ ಮಾತನಾಡಿದ ಅವರು, ಲೋಕನಾಯಕ್ ಜಯಪ್ರಕಾಶ್ ನಾರಾಯಣ್ ಅವರು ದೇಶಕ್ಕೆ ಗಮನಾರ್ಹ ಕೊಡುಗೆ ನೀಡಿದ ಮಹಾನ್ ಸ್ವಾತಂತ್ರ್ಯ ಹೋರಾಟಗಾರ, ಚಿಂತಕ ಮತ್ತು ರಾಷ್ಟ್ರೀಯ ನಾಯಕ ಎಂದು ಹೇಳಿದರು. ಆಧುನಿಕ ಶಿಕ್ಷಣದ ಜೊತೆಗೆ ಜನಸಾಮಾನ್ಯರಲ್ಲಿ ದೇಶದ ಸಂಸ್ಕೃತಿ ಮತ್ತು ಜ್ಞಾನವನ್ನು ಹರಡಲು ಪುಸ್ತಕಗಳು ಪ್ರಬಲ ಮಾಧ್ಯಮವಾಗಿದೆ ಎಂದರು. ರಾಷ್ಟ್ರ ನಿರ್ಮಾಣಕ್ಕೆ ಕೊಡುಗೆ ನೀಡುವ ಮತ್ತು ದೇಶಕ್ಕೆ ವೈಭವ ತರುವ ಎಲ್ಲಾ ಚಟುವಟಿಕೆಗಳು ಜ್ಞಾನದಲ್ಲಿ ಬೇರೂರಿವೆ. ಇದು ಆಚರಣೆಯಲ್ಲಿ ಅನುಷ್ಠಾನಕ್ಕೆ ಬಂದಾಗ ಬುದ್ಧಿವಂತಿಕೆ ಮತ್ತು ವಿವೇಕವಾಗಿ ರೂಪಾಂತರಗೊಳ್ಳುತ್ತದೆ ಎಂದು ಸಚಿವ ಅಮಿತ್ ಶಾ ಹೇಳಿದರು.

<>><><*><><<>

ಪ್ರಧಾನ ಮಂತ್ರಿ ಸೂಕ್ಷ್ಮ ಆಹಾರ ಸಂಸ್ಕರಣಾ ಉದ್ಯಮಗಳ ಯೋಜನೆಯಡಿ ದೇಶಾದ್ಯಂತ ಎರಡು ಲಕ್ಷಕ್ಕೂ ಹೆಚ್ಚು ಸೂಕ್ಷ್ಮ ಆಹಾರ ಸಂಸ್ಕರಣಾ ಉದ್ಯಮಗಳಿಗೆ ಸಾಲ ಮಂಜೂರು ಮಾಡಲಾಗಿದೆ.  ಈ ಯೋಜನೆಯು ೨೦ ಸಾವಿರದ ೩೦೦ ಕೋಟಿ ರೂಪಾಯಿಗಳಿಗೂ ಹೆಚ್ಚಿನ ಯೋಜನಾ ಹೂಡಿಕೆಗಳನ್ನು ಬಳಸಿಕೊಳ್ಳುವ ಮೂಲಕ ಸುಮಾರು ೧೧ ಲಕ್ಷ ನೇರ ಮತ್ತು ಪರೋಕ್ಷ ಉದ್ಯೋಗಾವಕಾಶಗಳನ್ನು ಸೃಷ್ಟಿಸಿದೆ. ನವದೆಹಲಿಯಲ್ಲಿ ಇಂದು ನಡೆದ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಕೇಂದ್ರ ಆಹಾರ ಸಂಸ್ಕರಣಾ ಕೈಗಾರಿಕೆಗಳ ಸಚಿವ ಚಿರಾಗ್ ಪಾಸ್ವಾನ್, ಈ ಸಾಧನೆಯು ದೇಶಾದ್ಯಂತ ಅಳೆಯಬಹುದಾದ ಫಲಿತಾಂಶಗಳಾಗಿ ರೂಪಾಂತರಗೊಳ್ಳುತ್ತಿದೆ ಎಂಬುದನ್ನು ತೋರಿಸುತ್ತದೆ ಎಂದು ಹೇಳಿದರು.  ಎಲ್ಲಾ ಫಲಾನುಭವಿಗಳಲ್ಲಿ ಸುಮಾರು ಶೇಕಡ ೪೪ ರಷ್ಟು ಮಹಿಳಾ ಉದ್ಯಮಿಗಳ ಭಾಗವಹಿಸುವಿಕೆಯು, ವಿಕಸಿತ ಭಾರತದ ಮೂಲಾಧಾರವಾದ ಮಹಿಳಾ ನೇತೃತ್ವದ ಅಭಿವೃದ್ಧಿಯ ನಿಜವಾದ ಮನೋಭಾವವನ್ನು ಪ್ರತಿಬಿಂಬಿಸುತ್ತದೆ ಎಂದು ಅವರು ತಿಳಿಸಿದರು.

<>><><*><><<>

ವಿಯೆಟ್ನಾಂನ ಫುಕ್ವಾಕ್ ದ್ವೀಪದ ಬಳಿ ಇಂದು ಭಾರತೀಯ ಪ್ರವಾಸಿಗರನ್ನು ಕರೆದೊಯ್ಯುತ್ತಿದ್ದ ಸ್ಪೀಡ್ ಬೋಟ್ ಮಗುಚಿ ಬಿದ್ದಿದೆ. ಸ್ಥಳೀಯ ಮಾಧ್ಯಮ ವರದಿಗಳ ಪ್ರಕಾರ, ೧೫ ಮಂದಿ ಭಾರತೀಯರು ಸಾವನ್ನಪ್ಪಿರುವ ಶಂಕೆ ಇದ್ದು, ೨೧ ಜನರನ್ನು ರಕ್ಷಿಸಲಾಗಿದೆ. ೩೨ ಭಾರತೀಯ ಪ್ರವಾಸಿಗರು ಮತ್ತು ನಾಲ್ವರು ಸಿಬ್ಬಂದಿಯನ್ನು ಹೊತ್ತೊಯ್ಯುತ್ತಿದ್ದ ದೋಣಿ ಹಾನ್ ಮೇ ರುಟ್ ನ್ಗೋಯಿ ದ್ವೀಪದಿಂದ ಸುಮಾರು ೪೦೦ ಮೀಟರ್ ದೂರದಲ್ಲಿ ಉರುಳಿಬಿದ್ದಿದ್ದು, ರಕ್ಷಣಾ ಕಾರ್ಯಾಚರಣೆ ಆರಂಭವಾಗಿದೆ. ಪೀಡಿತ ಕುಟುಂಬಗಳಿಗೆ ಮಾಹಿತಿ ಮತ್ತು ಸಹಾಯವನ್ನು ಒದಗಿಸಲು, ಹೋ ಚಿ ಮಿನ್ಹ್ ನಗರದಲ್ಲಿರುವ ಭಾರತೀಯ ರಾಯಭಾರಿ ಕಚೇರಿಯಲ್ಲಿ ನಿಯಂತ್ರಣ ಕೊಠಡಿಯನ್ನು ಸ್ಥಾಪಿಸಲಾಗಿದೆ. +೮೪ ೩೬ ೨೮೧ ೭೯೩೦, +೮೪ ೯೧ ೫೫೨ ೩೭ ೧೪ ಮತ್ತು +೮೪ ೩೩ ೪೫೨ ೦೪೧೪ ನಲ್ಲಿ ಸಂಪರ್ಕಿಸಬಹುದು. ಅಲ್ಲದೇ, ಹನೋಯ್‌ನಲ್ಲಿ ನಿಯಂತ್ರಣ ಕೊಠಡಿಯನ್ನು ಸ್ಥಾಪಿಸಲಾಗಿದ್ದು, +೮೪ ೯೧ ೩೦೮ ೯೧೬೫ ನಲ್ಲಿ ಸಂಪರ್ಕಿಸಬಹುದು ಎಂದು ಭಾರತೀಯ ರಾಯಭಾರ ಕಚೇರಿ ತಿಳಿಸಿದೆ. ದುರಂತಕ್ಕೆ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಮತ್ತು ಪ್ರಧಾನಿ ನರೇಂದ್ರ ಮೋದಿ ಸಂತಾಪ ಸೂಚಿಸಿದ್ದಾರೆ. ಗಾಯಾಳುಗಳು ಶೀಘ್ರವಾಗಿ ಮತ್ತು ಸಂಪೂರ್ಣವಾಗಿ ಚೇತರಿಸಿಕೊಳ್ಳಲಿ ಎಂದು ಹಾರೈಸಿದ್ದಾರೆ.

**<>><><*><><<>**

ಫಿಫಾ ವಿಶ್ವಕಪ್ ಫುಟ್ಬಾಲ್ ಪಂದ್ಯಾವಳಿಯ ಮೂರನೇ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ನಾರ್ವೆ ತಂಡ, ಇಂಗ್ಲೆಂಡ್ ವಿರುದ್ಧ ಸೆಣಸಲಿದೆ. ಮಿಯಾಮಿ ಕ್ರೀಡಾಂಗಣದಲ್ಲಿ ಪಂದ್ಯ ನಡೆಯಲಿದ್ದು, ಭಾರತೀಯ ಕಾಲಮಾನ ಮಧ್ಯರಾತ್ರಿ ೨:೩೦ ಕ್ಕೆ ಆರಂಭವಾಗಲಿದೆ. ಅರ್ಜೆಂಟೀನಾ-ಸ್ವಿಟ್ಜರ್‌ಲ್ಯಾಂಡ್ ನಡುವಿನ ಮತ್ತೊಂದು ಕ್ವಾರ್ಟರ್ ಫೈನಲ್ ಪಂದ್ಯ ಭಾರತೀಯ ಕಾಲಮಾನ ನಾಳೆ ಬೆಳಗ್ಗೆ ೬:೩೦ ಕ್ಕೆ ಕಾನ್ಸಾಸ್ ಸಿಟಿ ಕ್ರೀಡಾಂಗಣದಲ್ಲಿ ಆರಂಭವಾಗಲಿದೆ. ಸ್ಪೇನ್ ಮತ್ತು ಫ್ರಾನ್ಸ್ ತಂಡಗಳು ಸೆಮಿಫೈನಲ್‌ನಲ್ಲಿ ಈಗಾಗಲೇ ತಮ್ಮ ಸ್ಥಾನಗಳನ್ನು ಕಾಯ್ದಿರಿಸಿವೆ. ಬೆಲ್ಜಿಯಂ ವಿರುದ್ಧ ಸ್ಪೇನ್ ೨-೧ ರೋಮಾಂಚಕ ಜಯ ಸಾಧಿಸಿ ಮುನ್ನಡೆ ಸಾಧಿಸಿದರೆ, ಮೊರಾಕೊ ವಿರುದ್ಧ ಫ್ರಾನ್ಸ್ ೨-೦ ಅಂತರದ ಗೆಲುವು ಸಾಧಿಸಿ ಮುನ್ನಡೆ ಸಾಧಿಸಿದೆ.

**<>><><*><><<>**

ಇಂಗ್ಲೆಂಡ್‌ನ ಸೌತಂಪ್ಟನ್‌ನ ರೋಸ್‌ಬೌಲ್ ಕ್ರೀಡಾಂಗಣದಲ್ಲಿ ಇಂದು ಭಾರತ ಮತ್ತು ಇಂಗ್ಲೆಂಡ್ ನಡುವಿನ ಐದು ಪಂದ್ಯಗಳ ಟಿ-೨೦ ಕ್ರಿಕೆಟ್ ಸರಣಿಯ ಕೊನೆಯ ಪಂದ್ಯ ನಡೆಯುತ್ತಿದೆ. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡುತ್ತಿರುವ ಇಂಗ್ಲೆಂಡ್, ೧.೪ ಓವರ್‌ಗಳಲ್ಲಿ ೧ ವಿಕೆಟ್ ನಷ್ಟಕ್ಕೆ ೮ ರನ್ ಮಾಡಿ ಆಡುತ್ತಿದೆ. ಈಗಾಗಲೇ ೩-೦ ಅಂತರದಿಂದ ಸರಣಿಯನ್ನು ಇಂಗ್ಲೆಂಡ್ ವಶಪಡಿಸಿಕೊಂಡಿದೆ. ಒಂದು ಪಂದ್ಯ ಮಳೆಯಿಂದಾಗಿ ರದ್ದಾಗಿತ್ತು.

**<>><><*><><<>**

ಲಂಡನ್‌ನ ಲಾರ್ಡ್ಸ್ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಮಹಿಳಾ ಟೆಸ್ಟ್ ಕ್ರಿಕೆಟ್ ಪಂದ್ಯದ ಮೊದಲ ಇನ್ನಿಂಗ್ಸ್‌ನಲ್ಲಿ ಭಾರತ ೨೮೫ ರನ್ ಗಳಿಸಿದೆ. ಮೊದಲ ಇನ್ನಿಂಗ್ಸ್‌ನಲ್ಲಿ ಇಂಗ್ಲೆಂಡ್ ಮಹಿಳಾ ತಂಡ, ೧೬೦ ರನ್ ಗಳಿಸಿದೆ. ಈ ಮೂಲಕ ಇಂಗ್ಲೆಂಡ್ ೧೧೫ ರನ್‌ಗಳ ಹಿನ್ನಡೆಯಲ್ಲಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೬.೦೫ ಕ್ಕೆ <>*><>**